**ಕರ್ನಾಟಕ ಸರ್ಕಾರದ ನಡವಳಿ**

ವಿಷಯ: ಶ್ರೀ ಡಿ.ಪಿ.ರಾಜಪ್ಪ, ಸದಸ್ಯರು ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ, ಸತತವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವ ಕುರಿತು ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 18-03-2017 ರ ಕಾರಣ ಕೇಳುವ ನೋಟೀಸ್.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ ರವರ ಪತ್ರ ಸಂಖ್ಯೆ: ಜಿ.ಪಂ.ಹಾ/ಪಶಾ/44/2016-17 ದಿನಾಂಕ: 03-02-2017.
3. ಸರ್ಕಾರದ ಇದೇ ಸಮಸಂಖ್ಯೆಯ ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ:25-07-2017,

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಡಿ.ಪಿ.ರಾಜಪ್ಪ, ಸದಸ್ಯರು ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ, ರವರು ದಿನಾಂಕ: 13-01-2016, 18-04-2016, 30-05-2016, 27-06-2016, 15-09-2016 ಹಾಗೂ 23-06-2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿದ್ದು, ಸದರಿ ಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳಲು ದಿನಾಂಕ: 03-02-2017 ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾಸನ ಜಿಲ್ಲೆ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀ ಡಿ.ಪಿ.ರಾಜಪ್ಪ, ಸದಸ್ಯರು ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ, ಇವರಿಗೆ ದಿನಾಂಕ: 18-03-2017 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಶ್ರೀ ಡಿ.ಪಿ.ರಾಜಪ್ಪ, ಸದಸ್ಯರು ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ, ರವರು ತಮ್ಮ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಶ್ರೀ ಡಿ.ಪಿ.ರಾಜಪ್ಪ, ಸದಸ್ಯರು ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ, ಇವರು ದಿನಾಂಕ: 25-07-2017 ರಂದು ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು, ಸದರಿಯವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಶ್ರೀ ಡಿ.ಪಿ.ರಾಜಪ್ಪ, ಸದಸ್ಯರು ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ, ರವರು ದಿನಾಂಕ: 13-01-2016, 18-04-2016, 30-05-2016, 27-06-2016, 15-09-2016 ಹಾಗೂ 23-06-2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದು ಕಂಡು ಬಂದಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಂತೆ ಜೆ.ಸಿ.ಪುರ ಗ್ರಾಮ ಪಂಚಾಯತಿ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/208/ಗ್ರಾಪಂಅ/2017**

**ಬೆಂಗಳೂರು, ದಿನಾಂಕ:23-10-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಡಿ.ಪಿ.ರಾಜಪ್ಪ, ಸದಸ್ಯರು ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ, ಇವರು ದಿನಾಂಕ: 13-01-2016, 18-04-2016, 30-05-2016, 27-06-2016, 15-09-2016 ಹಾಗೂ 23-06-2016 ರಂದು ನಡೆದ ಗ್ರಾಮ

ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದರಿಂದ, ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಜೆ.ಸಿ.ಪುರ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ.
3) ಶ್ರೀ ಡಿ.ಪಿ.ರಾಜಪ್ಪ, ಸದಸ್ಯರು ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ,
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಜೆ.ಸಿ.ಪುರ ಗ್ರಾಮ ಪಂಚಾಯಿತಿ, ಅರಸಿಕೆರೆ ತಾಲ್ಲೂಕು, ಹಾಸನ ಜಿಲ್ಲೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.
6) ಗಣಕ ಕೋಶ.